

Spaceport America designed by URS/Foster + Partners
Conceptual image courtesy of Vyonyx Ltd

ಬಾಹ್ಯಾಕಾಶ ನೌಕೆಯಲ್ಲಿ ಒಂದು ಸುತ್ತು ಹೋಗಿ ಬರಲು ಈಗಾಗಲೆ 300 ಜನ ಟಿಕೆಟ್ ಬುಕ್ ಮಾಡಿಸಿದ್ದಾರೆ. ಸದ್ಯಕ್ಕೆ ಶುಲ್ಕ ಒಂದು ಕೋಟಿ ರೂಪಾಯಿ. ಮುಂದೆ ಇನ್ನೂ ಕಡಿಮೆ ಆಗಬಹುದು!

# ಟ್ರಾವೆಲ್ ಅಂಡ್ ಅಂತರಿಕ್ಷ ಟೂರ್

■ **ಟಿ.ಜಿ.ಶ್ರೀನಿಧಿ**




ಬಾಹ್ಯಾಕಾಶಕ್ಕೆ ಪ್ರವಾಸ ಹೋಗುವ ಆಲೋಚನೆ ಹೊಸದೇನಲ್ಲ. ಹಿಂದೆ ಬರಿಯ ಕತೆ–ಕಾದಂಬರಿಗಳಿಗಷ್ಟೇ ಸೀಮಿತವಾಗಿದ್ದ ಈ ಕನಸು ನನಸಾಗಿಯೇ ಹತ್ತು ವರ್ಷಗಳ ಮೇಲಾಗಿದೆ. ಆದರೆ ಈ ಪ್ರವಾಸದ ವೆಚ್ಚ ಈವರೆಗೂ ಸುಮಾರು ನೂರು ಕೋಟಿ ರೂಪಾಯಿಗಳ ಆಸುಪಾಸಿನಲ್ಲಿರುವುದರಿಂದ ನಮ್ಮಂಥ ಸಾಮಾನ್ಯರು ಬಾಹ್ಯಾಕಾಶ ಪ್ರವಾಸದ ಬಗ್ಗೆ ಯೋಚಿಸುವುದು ಮಾತ್ರ ಸಾಧ್ಯವಾಗಿರಲಿಲ್ಲ.

ಪ್ರಸ್ತುತ ಕೋಟಿಗಳಲ್ಲಿರುವ ಟಿಕೇಟಿನ ಬೆಲೆ ಕನಿಷ್ಟ ಪಕ್ಷ ಲಕ್ಷಗಳಿಗಾದರೂ ಇಳಿದರೆ ಮಾತ್ರ ಜನಸಾಮಾನ್ಯರು ಬಾಹ್ಯಾಕಾಶಕ್ಕೆ ಹೋಗಿ ಬರುವುದು ಸಾಧ್ಯ ಎಂದು ಅರಿತುಕೊಂಡ ಅನೇಕ ಸಂಸ್ಥೆಗಳು ಈ ನಿಟ್ಟಿನಲ್ಲಿ ಬಹಳ ವರ್ಷಗಳಿಂದ ಕೆಲಸ ಮಾಡುತ್ತಿವೆ.

ಇಂಥ ಸಂಸ್ಥೆಗಳಲ್ಲೊಂದು ಅಮೆರಿಕಾದ ಸ್ಕೇಲ್ಡ್ ಕಾಂಪೋಸಿಟ್ಸ್. ಅಂತರಿಕ್ಷ ಯಾತ್ರೆಯನ್ನು ಸುಲಭವಾಗಿಸುವ ನಿಟ್ಟಿನಲ್ಲಿ ಅತ್ಯುತ್ತಮ ಪ್ರಯತ್ನಕ್ಕಾಗಿ ಮೀಸಲಾಗಿದ್ದ ಒಂದು ಕೋಟಿ ಡಾಲರ್ ಮೊತ್ತದ 'ಎಕ್ಸ್ ಪ್ರೈಜ್' ಬಹುಮಾನ ಗೆದ್ದ ಸಂಸ್ಥೆ ಇದು. ಈ ಸಂಸ್ಥೆ ತಯಾರಿಸಿದ 'ಸ್ಪೇಸ್ ಶಿಪ್ ಒನ್' ಎಂಬ ಅಂತರಿಕ್ಷ ವಾಹನ 2004ರಲ್ಲಿ ಯಶಸ್ವಿ ಯಾನ ಕೈಗೊಂಡು ಭೂಮಿಯ ಮೇಲಿಂದ ನೂರಾ ಹತ್ತು ಕಿಲೋ ಮೀಟರುಗಳಷ್ಟು ಎತ್ತರದವರೆಗೆ ಹೋಗಿ ಬಂದಿತ್ತು.

ಅಂತರಿಕ್ಷ ಪ್ರವಾಸದ ಕಮರ್ಷಿಯಲ್ ಸಾಧ್ಯತೆಗಳ ಬಗ್ಗೆ ಗಂಭೀರ ಚಿಂತನೆ ನಡೆದದ್ದೇ ಆಗ. ಎಲ್ಲ ಸರಿಯಾಗಿ ನಡೆದರೆ ಇದೆಷ್ಟು ದೊಡ್ಡ ಪ್ರಮಾಣದ ಮಾರುಕಟ್ಟೆಯಾಗಬಲ್ಲದು ಎಂದು ಅರಿತುಕೊಂಡ ವರ್ಜಿನ್ ಸಂಸ್ಥೆ ತಕ್ಷಣವೇ ಸ್ಕೇಲ್ಡ್ ಕಾಂಪೋಸಿಟ್ಸ್ ಜೊತೆಗೆ ಕೈಗೂಡಿಸಿತು; ವರ್ಜಿನ್ ಗೆಲಾಕ್ಟಿಕ್ ಎಂಬ ಹೊಸ ಸಂಸ್ಥೆಯನ್ನೂ ಹುಟ್ಟುಹಾಕಿತು.

(8ನೇ ಪುಟ ನೋಡಿ)